ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001.

ಸಂಖ್ಯೆ:ಕಾಶಿಇ/ಶೈವಿ/27/ಪ್ರತ್ಯಾಯೋಜನೆ/2017-18

ದಿನಾಂಕ:20.04.2017

**ಆದೇಶ**

ವಿಷಯ: ರಾಷ್ಟ್ರೀಯ/ರಾಜ್ಯ/ವಿ.ವಿ/ವಲಯ/ಪ್ರಾದೇಶಿಕ ಮಟ್ಟದ ಶೈಕ್ಷಣಿಕ ಸಭೆ-ಸಮಾರಂಭ/ ವಿಚಾರ ಸಂಕಿರಣ / ಕಾರ್ಯಗಾರ / ಸಮ್ಮೇಳನ ಮುಂತಾದ ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದ ಕಾರ್ಯಕ್ರಮಗಳಿಗೆ ಹಾಜರಾಗಲು ಅನುಮತಿ ಹಾಗೂ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡುವ ಬಗ್ಗೆ.

ಉಲ್ಲೇಖ: ದಿನಾಂಕ:22.12.2010ರ ಈ ಕಛೇರಿಯ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/25/ ಸುತ್ತೋಲೆ/2010-11.

* * * * * * * * *

ಶೈಕ್ಷಣಿಕ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ಸರ್ಕಾರಿ, ಖಾಸಗಿ ಅನುದಾನಿತ, ಖಾಸಗಿ ಅನುದಾನ ರಹಿತ ಪದವಿ ಕಾಲೇಜುಗಳು, ವಿವಿಧ ವಿಶ್ವವಿದ್ಯಾಲಯಗಳು ಮತ್ತು ವಿಶ್ವವಿದ್ಯಾಲಯದ ವಿಭಾಗಗಳು ಮತ್ತು ಇನ್ನಿತರೆ ಸಂಘ ಸಂಸ್ಥೆಗಳು ಆಯೋಜಿಸುವ ರಾಷ್ಟ್ರೀಯ/ರಾಜ್ಯ / ವಿ.ವಿ / ವಲಯ/ ಪ್ರಾದೇಶಿಕ ಮಟ್ಟದ ಶೈಕ್ಷಣಿಕ ಸಭೆ-ಸಮಾರಂಭ / ವಿಚಾರ ಸಂಕಿರಣ / ಕಾರ್ಯಗಾರ / ಸಮ್ಮೇಳನ ಮುಂತಾದ ಶೈಕ್ಷಣಿಕ ಕಾರ್ಯಕ್ರಮಗಳಿಗೆ ಹಾಜರಾಗುವ ***ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಅಧ್ಯಾಪಕರುಗಳಿಗೆ ಅನುಮತಿ ಹಾಗೂ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡುವ ಕಾರ್ಯವನ್ನು ನಿರ್ವಹಿಸಲು ತಕ್ಷಣದಿಂದ ಜಾರಿಗೆ ಬರುವಂತೆ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ ಪ್ರತ್ಯಾಯೋಜಿಸಲಾಗಿದೆ.***

ಅದರಂತೆ, ಸದರಿ ಕಾರ್ಯಕ್ರಮಗಳಿಗೆ ಹಾಜರಾಗುವ ಅಧ್ಯಾಪಕರುಗಳಿಗೆ ಹಾಜರಾತಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ಅಧಿಕಾರಿ/ಪ್ರಾಂಶುಪಾಲರಿಗೆ ಒಪ್ಪಿಸುವ ನಿಬಂಧನೆಗೊಳಪಟ್ಟು ಸರ್ಕಾರ/ ಇಲಾಖೆಯ ಮೇಲೆ ಯಾವುದೇ ಆರ್ಥಿಕ ಹೊರೆಯಿಲ್ಲದೆ ***ಒಂದು ಸೆಮಿಸ್ಟರ್ ಅವಧಿಗೆ 04 ದಿನಗಳಿಗೆ ಮೀರದಂತೆ ಅನ್ಯಕಾರ್ಯನಿಮಿತ್ತ ರಜೆಯನ್ನು ಮಂಜೂರು ಮಾಡಲು ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಅನುಮತಿ ನೀಡಲಾಗಿದೆ.***

ಆದ್ದರಿಂದ ಇನ್ನು ಮುಂದೆ ಶೈಕ್ಷಣಿಕ ಸಭೆ-ಸಮಾರಂಭ / ವಿಚಾರ ಸಂಕಿರಣ / ಕಾರ್ಯಾಗಾರ / ಸಮ್ಮೇಳನ ಮುಂತಾದ ಶೈಕ್ಷಣಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಕಾಲೇಜುಗಳ, ವಿಶ್ವವಿದ್ಯಾಲಯಗಳ, ಸಂಘ ಸಂಸ್ಥೆಗಳ ಸಂಘಟಕರು ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.

*ಕಾಲೇಜು ಶಿಕ್ಷಣ ಆಯುಕ್ತರು*

ಇವರಿಗೆ:

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಖಾಸಗಿ ಅನುದಾನ ರಹಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿ:

1. ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರುಗಳಿಗೆ/ವಿಭಾಗಗಳ ಮುಖ್ಯಸ್ಥರುಗಳಿಗೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು